ಶ್ರೀ ಭೀಮಣ್ಣ ಖಂಡ್ರೆ
(ಸಾರಿಗೆ ಸಚಿವರು)

ಹೌದು

ಇಲ್ಲ

ಹುಬ್ಬಳ್ಳಿಯ ಹೊಸ ಬಸ್ ನಿಲ್ದಾಣ ನಿರ್ಮಾಣಕ್ಕಾಗಿ ಈಗಾಗಲೇ ಶಂಕುಸ್ಥಾಪನೆ ಮಾಡಲಾಗಿದ್ದ ಸ್ಥಳವು ಸೂಕ್ತವಾಗಿಲ್ಲದ ಕಾರಣ ಸದರಿ ಉದ್ದೇಶಕ್ಕಾಗಿ ಬೈರೇದೇವರಕೊಪ್ಪದಲ್ಲಿ ನಿರ್ಮಿಸಲು ಉದ್ದೇಶಿಸಿದೆ.

ಹೌದು

ಸೂಕ್ತ ಜಮೀನು ವಶಕ್ಕೆ ತೆಗೆದುಕೊಂಡ ತಕ್ಷಣ.

ಭೂಸ್ವಾಧೀನವಾದ ನಂತರ ಬಸ್ ನಿಲ್ದಾಣದ ಅಂದಾಜು ವೆಚ್ಚ ಮತ್ತು ಇತರೆ ವೆಚ್ಚಗಳ ಅನುಮೋದನೆಯನ್ನು ಪಡೆದ ನಂತರ ಎಲವರಗಳು ದೊರೆಯುತ್ತವೆ.

ವಿಷಯ:- ಹುಬ್ಬಳ್ಳಿ ಡಿವಿಜನ್‌ನಲ್ಲಿ ಕೆ.ಎಸ್.ಆರ್.ಟಿ.ಸಿ. ಸಿಬ್ಬಂದಿಗಳ ಕೊರತೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ ೧೫:- (೨೭೮೩)
ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ)
ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಬ್ಬಳ್ಳಿ ವಿಭಾಗದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಡಿಪೋದಲ್ಲಿ ಸಿಬ್ಬಂದಿ ಕೊರತೆ ಇರುವುದು ನಿಜವೇ?

ಆ) ಹಾಗಿದ್ದಲ್ಲಿ ಆ ಬಗ್ಗೆ ಕೈಗೊಂಡ ಕ್ರಮವೇನು?

ಶ್ರೀ ಭೀಮಣ್ಣ ಖಂಡ್ರೆ
(ಸಾರಿಗೆ ಸಚಿವರು)

ಹೌದು

ನೇಮಕಾತಿ ಬಗ್ಗೆ ಇರುವ ನಿರ್ಭಂದವನ್ನು ತೆಗೆದು ಹಾಕಲು ಸರ್ಕಾರವು ಪರಿಶೀಲಿಸುತ್ತದೆ.

ಈ ವಿಷಯದಲ್ಲಿ ತೀರ್ಮಾನ ತೆಗೆದುಕೊಂಡ ನಂತರ ಖಾಲಿ ಇರುವ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

ವಿಷಯ:- ಪಟ್ಟಣ ಪ್ರದೇಶಗಳಿಂದ ಗ್ರಾಮಾಂತರ ಪ್ರದೇಶಗಳಿಗೆ ಬಿಡುವ ಸಿಟಿ ಬಸ್ಸುಗಳ ಅಂತರ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ ೧೭:- (೪೭೮)
ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ)
ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಹರದ ಸಹರದ್ದಿನಿಂದ ಗ್ರಾಮಾಂತರಕ್ಕೆ ಬಿಡುವ ಸಿಟಿ ಬಸ್ಸುಗಳ ಕಿ.ಮೀ. ಅಂತರವೆಷ್ಟು?

ಆ) ಬಿ.ಟಿ.ಎಸ್. ಬಸ್ಸುಗಳು ಗ್ರಾಮಾಂತರ ಪ್ರದೇಶಕ್ಕೆ ಬಿಡುವಾಗ ಎಷ್ಟು ಕಿ.ಮೀ. ಅಂತರವಿರಬೇಕು.

ಇ) ಬಿ.ಟಿ.ಎಸ್. ಹಾಗೂ ರಾಜ್ಯದಲ್ಲಿರುವ ಬೇರೆ ಸಿಟಿ ಬಸ್ಸುಗಳು ಗ್ರಾಮಾಂತರ ಪ್ರದೇಶಕ್ಕೆ ಬಿಡುವಾಗ ಕಿ.ಮೀ.ಗಳಲ್ಲಿ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?